# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 25-03-2021 ಪ್ರಶ್ನೆ ಸಂಖ್ಯೆ : 1873 (2164)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು)

ಉತ್ತರ ನೀಡಬೇಕಾದ ದಿನಾಂಕ : 25-03-2021

ಉತ್ತರಿಸುವ ಸಚಿವರು: ಯುವ ಸಬಲೀಕರಣ ಮತ್ತು ಕ್ರೀಡೆ ಹಾಗೂ ಯೋಜನಾ ಸಚಿವರು

ವಿಷಯ : `ಖೇಲ್ ಇಂಡಿಯಾ' ಯೋಜನೆ

(ಅ) ಕೇಂದ್ರ ಸರ್ಕಾರದ ಯುವಜನ ಮತ್ತು ಕ್ರೀಡಾ ಮಂತ್ರಾಲಯದ `ಖೇಲ್ ಇಂಡಿಯಾ' ಯೋಜನೆ ಅಡಿ ರಾಜ್ಯ ಸರ್ಕಾರ ರಾಜ್ಯದಲ್ಲಿನ ದೂರದ ಗ್ರಾಮಾಂತರ ಪ್ರದೇಶಗಳಲ್ಲಿ ಕ್ರೀಡಾ ಮನೋಭಾವ, ಆಸಕ್ತಿ ಮತ್ತು ಪ್ರತಿಭೆಯುಳ್ಳ ಗ್ರಾಮಾಂತರ ಯುವಕರನ್ನು ಕ್ರೀಡೆಗೆ ಆಕರ್ಷಿಸಲು ಈವರೆವಿಗೂ ಕೈಗೊಂಡಿರುವ ಕಾರ್ಯಕ್ರಮಗಳೇನು; (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಆ) ರಾಜ್ಯದಲ್ಲಿ ಈ ಯೋಜನೆಯಡಿ ಜಿಲ್ಲೆ, ತಾಲ್ಲೂಕು ಮತ್ತು ಹೋಬಳಿ ಮಟ್ಟದಲ್ಲಿ ಗ್ರಾಮಾಂತರ ಯುವಕರಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಯೋಜನೆ ಅಡಿಯಲ್ಲಿ ಒದಗಿಸಿರುವ ಮೂಲಸೌಕರ್ಯಗಳು ಯಾವುವು; (ಜಿಲ್ಲಾವಾರು ವಿವರ ನೀಡುವುದು)

(ಇ) ಅಸಾಧಾರಣ ಪ್ರತಿಭೆಯುಳ್ಳ ಕ್ರೀಡಾಪಟುಗಳನ್ನು ಹೊರತುಪಡಿಸಿ, ರಾಜ್ಯ ಮತ್ತು ಜಿಲ್ಲಾ ಮಟ್ಟದಲ್ಲಿ ಪ್ರತಿಭೆ ಬೆಳಗಿಸಿರುವ ಕ್ರೀಡಾ ಯುವಕರಿಗೆ ರಾಜ್ಯ ಸರ್ಕಾರದಿಂದ ದೊರೆಯುತ್ತಿರುವ ಆರ್ಥಿಕ ಸವಲತ್ತು ಒಳಗೊಂಡಂತೆ ಇರುವ ಇತರೆ ಸವಲತ್ತುಗಳು ಯಾವುವು? (ವಿವರ ನೀಡುವುದು)